ಅ) ನೀರಾವರಿ ಇಲಾಖೆಯಲ್ಲಿ ಕಳೆದ ಎರಡು ವರ್ಷಗಳಿಂದ ಸುಮಾರು 25ಕ್ಕೂ ಹೆಚ್ಚು ಇಂಜಿನಿಯರ್‌ಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸದರಿ ಹುದ್ದೆಗಳ ಭರ್ತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ, ಇದರಿಂದಾಗಿ ಬಹುಮುಖ್ಯ ಯೋಜನೆಗಳಿಗೆ ಹಿನ್ನಡೆಯುಂಟಾಗುವುದಿಲ್ಲವೇ;

ಇ) ಈ ಹುದ್ದೆಗಳ ಪ್ರಭಾರದಲ್ಲಿರುವವರು ಕಾವೇರಿ ಕೃಷ್ಣಾ ನ್ಯಾಯಾಧೀಕರಣದ ಮುಂದೆ ರಾಜ್ಯವನ್ನು ಪ್ರತಿನಿಧಿಸಲು ಸಾಧ್ಯವಾಗದಿರುವ ಸಂಗತಿ ನಿಜವೇ;

ಈ) ಈ ಇಂಜಿನಿಯರ್ ಹುದ್ದೆಗಳ ಭರ್ತಿಗೆ ಸರ್ಕಾರ ವಿಳಂಬ ಮಾಡಲು ಕಾರಣಗಳೇನು;

ಉ) ಈ ರೀತಿಯ ಎಷ್ಟು ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ. ಈ ಬಗ್ಗೆ ಸರ್ಕಾರದ ನಿರ್ಲಕ್ಷ್ಯ ಧೋರಣೆ ಏಕೆ, ನೇಮಕಕ್ಕೆ ಕಾನೂನು ತೊಡಕುಗಳೇನಾದರೂ ಇವೆಯೇ; ಹಾಗಿದ್ದಲ್ಲಿ ಸರ್ಕಾರದ ಕ್ರಮಗಳೇನು; (ವಿವರಿಸಿ)?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಹೌದು.

ಆ) 1) ಖಾಲಿಯಿರುವ ಪ್ರಧಾನ ಇಂಜಿನಿಯರ್ ಮತ್ತು ಮುಖ್ಯ ಇಂಜಿನಿಯರ್ ಹುದ್ದೆಗಳನ್ನು ಭರ್ತಿ ಮಾಡಲು ಸಿಬ್ಬಂದಿ ಮತ್ತು ಆಡಳಿತ ಇಲಾಖೆಯನ್ನು ಕೋರಲಾಗಿದೆ.

2) ಜಲಸಂಪನ್ಮೂಲ ಇಲಾಖೆಯಲ್ಲಿ ಖಾಲಿ ಇದ್ದ ಸಹಾಯಕ ಇಂಜಿನಿಯರ್ ಹುದ್ದೆಗಳನ್ನು ಮತ್ತು ಕಿರಿಯ ಇಂಜಿನಿಯರ್ ಹುದ್ದೆಗಳನ್ನು ನೇಮಕಾತಿ ಸಮಿತಿಯನ್ನು ರಚಿಸಿ ನೇಮಕಾತಿ ಮಾಡಲಾಗಿದೆ. ಆದಾಗ್ಯೂ ಈ ಎರಡು ವೃಂದದ ಕೆಲವು ಹುದ್ದೆಗಳು ಇನ್ನೂ ಖಾಲಿ ಇರುತ್ತವೆ.

3) ಇನ್ನುಳಿದ ಕೆಲವು ವೃಂದದ ಇಂಜಿನಿಯರುಗಳ ಹುದ್ದೆಗಳನ್ನು ಸ್ಥಳ ನಿಯುಕ್ತಿ ಮತ್ತು ವರ್ಗಾವಣೆಗಳ ಮೂಲಕ ಭರ್ತಿ ಮಾಡಲಾಗುತ್ತಿದೆ.

ಇ) ಇಲ್ಲ

ಕಾವೇರಿ ಕೃಷ್ಣಾ ನ್ಯಾಯಾಧೀಕರಣದ ಮುಂದೆ ರಾಜ್ಯವನ್ನು ಸಮರ್ಥವಾಗಿ ಪ್ರತಿನಿಧಿಸಲು ಮುಖ್ಯ ಇಂಜಿನಿಯರ್ (ಅಂತರ ರಾಜ್ಯ ಜಲ ವಿವಾದ) ಹುದ್ದೆಯು ಭರ್ತಿ ಯಾಗಿದ್ದು ಅವರು ಮತ್ತು ಅವರ ಸಿಬ್ಬಂದಿ ಸಮರ್ಥವಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಈ) ಇಲಾಖೆಯಲ್ಲಿ ಖಾಲಿಯಿರುವ ಮುಖ್ಯ ಇಂಜಿನಿಯರ್ ಮತ್ತು ಪ್ರಧಾನ ಇಂಜಿನಿಯರುಗಳಿಗೆ ಬಡ್ತಿ ನೀಡುವ ಮತ್ತು ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ನಿರ್ವಹಿಸುತ್ತಿದ್ದು ಕೆಲವು ಕಾನೂನು ತೊಡಕುಗಳಿಂದ ಈ ವೃಂದದ ಹುದ್ದೆಗಳು ಖಾಲಿ ಇರುತ್ತವೆ.

ಉ) ಜಲಸಂಪನ್ಮೂಲ ಇಲಾಖೆಯಲ್ಲಿನ ಪ್ರಧಾನ ಇಂಜಿನಿಯರ್ ಮತ್ತು ಮುಖ್ಯ ಇಂಜಿನಿಯರ್ ಹುದ್ದೆಗಳನ್ನು ಹೊರತುಪಡಿಸಿ ಉಳಿದ ವೃಂದದ ಹುದ್ದೆಗಳಾದ ಸಹಾಯಕ ಇಂಜಿನಿಯರ್ ಹುದ್ದೆಗಳು 490 ಮತ್ತು ಕಿರಿಯ ಇಂಜಿನಿಯರ್ ಹುದ್ದೆಗಳು 491 ಹುದ್ದೆಗಳು ಖಾಲಿ ಇರುತ್ತವೆ. ಈ ಹುದ್ದೆಗಳನ್ನು ನೇಮಕಾತಿ ಸಮಿತಿಯನ್ನು ರಚಿಸಿ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿದ್ದು ಇದಕ್ಕೆ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಭರ್ತಿ ಮಾಡಲಾಗಿರುವುದಿಲ್ಲ.

5373(5421) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮಲಪ್ರಭಾ ನದಿಗೆ ಜೋಡಿಸುವ ಕಳಸಾ–ಬಂಡೋರಿ ನಾಲಾ ಯೋಜನೆ ಕಾಮಗಾರಿ ಈಗ ಯಾವ ಹಂತದಲ್ಲಿದೆ;

ಆ) ಈ ಯೋಜನೆ ನೆನೆಗುದಿಗೆ ಬಿದ್ದಿರುವುದು ನಿಜವೇ; ಕಾರಣಗಳೇನು;

ಇ) ಈ ಯೋಜನೆಯ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ತೆಗೆದು ಕೊಂಡಿರುವ ಕ್ರಮಗಳೇನು (ವಿವರ ನೀಡುವುದು)?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು) :

ಅ) ಕಳಸಾ ನಾಲಾ ಮತ್ತು ಬಂಡೋರಿ ನಾಲಾ ಯೋಜನೆಗಳನ್ನು ಕೈಗೆತ್ತಿಕೊಳ್ಳಬೇಕಾಗಿದೆ. ಸದರಿ ಕಾಮಗಾರಿಗಳನ್ನು ಪ್ರಾರಂಭಿಸಲು ಅಗತ್ಯವಾದ ಪೂರ್ವಭಾವಿ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಆ) ಕೇಂದ್ರ ಸರ್ಕಾರದ ಜಲ ಸಂಪನ್ಮೂಲ ಇಲಾಖೆಯ ಪತ್ರ ದಿನಾಂಕ 30.4.02 ರಲ್ಲಿ ಹುಬ್ಬಳ್ಳಿ ಧಾರವಾಡ ನಗರಗಳ ಕುಡಿಯುವ ನೀರು ಪೂರೈಕೆ ಸಲುವಾಗಿ ಮಹಾದಾಯಿ ಕಣಿವೆಯಿಂದ 7.56 ಟಿ.ಎಂ.ಸಿ. ನೀರು ಮಲಪ್ರಭಾ ನದಿಗೆ ತಿರುಗಿಸಲು ಕೆಲವು ಷರತ್ತುಗಳೊಡನೆ ತಾತ್ವಿಕ ಒಪ್ಪಿಗೆ ನೀಡಿತ್ತು. ಆದರೆ ಗೋವಾ ರಾಜ್ಯವು ಈ ತಾತ್ವಿಕ ಒಪ್ಪಿಗೆಯನ್ನು ವಿರೋಧಿಸಿದ್ದರಿಂದ ಕೇಂದ್ರ ಸರ್ಕಾರವು ದಿನಾಂಕ: 30.04.2002ರಲ್ಲಿ ನೀಡಿದ್ದ ಒಪ್ಪಿಗೆಯನ್ನು ದಿನಾಂಕ: 19–09–2002ರಂದು ತಡೆಹಿಡಿದಿರುತ್ತದೆ.

ಇ) ಮೇಲಿನ ತಡೆ ಆದೇಶವನ್ನು ತೆರವುಗೊಳಿಸುವ ನಿಟ್ಟಿನಲ್ಲಿ ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಮಾನ್ಯ ಜಲ ಸಂಪನ್ಮೂಲ ಸಚಿವರು ಮತ್ತು ಮಾನ್ಯ ಮುಖ್ಯ ಮಂತ್ರಿಗಳಿಂದ ಕೇಂದ್ರ ಸರ್ಕಾರಕ್ಕೆ ಅಗ್ರಹಪೂರ್ವಕವಾಗಿ ಹಲವಾರು ಪತ್ರಗಳನ್ನು ಬರೆಯಲಾಗಿದೆ.

ದಿನಾಂಕ: 11.02.2005 ರಂದು ರಾಜ್ಯಕ್ಕೆ ಭೇಟಿಯನ್ನಿತ್ತ ಮಾನ್ಯ ಪ್ರಧಾನ ಮಂತ್ರಿಗಳಿಗೆ ಮಾನ್ಯ ಮುಖ್ಯಮಂತ್ರಿಗಳಿಂದ ಈ ವಿಷಯದ ಕುರಿತು ಭಿನ್ನವತ್ತಳೆಯನ್ನು ಸಲ್ಲಿಸಲಾಗಿದೆ.

ದಿನಾಂಕ: 15–3–2005 ರಂದು ನವದೆಹಲಿಯಲ್ಲಿ ಕೇಂದ್ರ ಜಲ ಸಂಪನ್ಮೂಲ ಸಚಿವರೊಂದಿಗೆ ಜರುಗಿದ ಸಭೆಯಲ್ಲಿ ರಾಜ್ಯದ ಸಂಸತ್ ಸದಸ್ಯರಿಗೆ ಮತ್ತು ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರಿಂದ ದಿನಾಂಕ : 19–9–2002ರ ತಡೆ ಆದೇಶವನ್ನು ಶೀಘ್ರವೇ ಹಿಂತೆಗೆದುಕೊಳ್ಳುವಂತೆ ಒತ್ತಾಯಿಸಲಾಗಿದೆ.

ಮಾನ್ಯ ಮುಖ್ಯಮಂತ್ರಿಗಳು ಮಾನ್ಯ ಪ್ರಧಾನ ಮಂತ್ರಿಯವರಿಗೆ ದಿನಾಂಕ: 14–7–2005ರಂದು ಪತ್ರವನ್ನು ಬರೆದು ಸದರಿ ವಿಷಯವನ್ನು ಮಧ್ಯ ಪ್ರವೇಶಿಸಿ ಸದರಿ ತಡೆ ಆದೇಶವನ್ನು ಕೂಡಲೇ ಹಿಂತೆಗೆದುಕೊಳ್ಳಬೇಕೆಂದು ಒತ್ತಾಯಿಸಿರುತ್ತಾರೆ.

ದಿನಾಂಕ: 19–7–2005ರಂದು ಮಾನ್ಯ ಮುಖ್ಯಮಂತ್ರಿಗಳು ಕಳಸಾ ಬಂಡೋರಿ ತಿರುವು ನಾಲಾ ಯೋಜನೆಗೆ ಕೇಂದ್ರ ಸರ್ಕಾರವು ನೀಡಿರುವ ತಡೆ ಆದೇಶದ ತೆರವಿಗಾಗಿ ಮುಂದೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಸರ್ವಪಕ್ಷಗಳ ಮುಖಂಡರೊಂದಿಗೆ ಚರ್ಚಿಸಿರುತ್ತಾರೆ.

5374(5423) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ. ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೇಂದ್ರ ಸರ್ಕಾರವು ಕರ್ನಾಟಕ ಪಟ್ಟಣ ಅಭಿವೃದ್ಧಿ ಹಣಕಾಸು ಸಂಸ್ಥೆಯ ಮತಿಯಿಂದ ಉತ್ತರ ಕರ್ನಾಟಕದಲ್ಲಿ 11 ಪಟ್ಟಣಗಳಲ್ಲಿ ಅವುಗಳ ಅಭಿವೃದ್ಧಿಗೆ ಯೋಜನೆಗೆ ರೂ. 600 ಕೋಟಿಗಳ ಯೋಜನೆ ನಿರೂಪಣೆ ಮಾಡಿದ್ದು ನಿಜವೇ;

ಆ) ಹಾಗಿದ್ದಲ್ಲಿ, ಯಾವ ಯಾವ ಪಟ್ಟಣಗಳು ಇದರಲ್ಲಿ ಸೇರ್ಪಡೆ ಆಗಿವೆ: ಅವುಗಳಿಗೆ ನಿಗದಿಪಡಿಸಿದ ಹಣವೆಷ್ಟು;